**ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ,**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು.**

ಜಿಲ್ಲಾ ಮಟ್ಟದ ಕಛೇರಿಗಳ ಸಂಕೀರ್ಣ ಕಟ್ಟಡ, ಕೊಠಡಿ ಸಂಖ್ಯೆ: 21-28, 2ನೇ ಮಹಡಿ, ಸಿದ್ಧಾರ್ಥನಗರ, ಮೈಸೂರು-570011

ನಂ.ಹಿಂವಕಇ-7/ವಿ.ವೇ/ಸಿಆರ್-02/2021-22, ದಿನಾಂಕ:13.12.2021.

# ಪ್ರಕಟಣೆ

ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ಪ್ರವರ್ಗ-1 ವಿದ್ಯಾರ್ಥಿಗಳಿಂದ 2021-22ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ಊಟ ಮತ್ತು ವಸತಿ ಸಹಾಯ ಯೋಜನೆ(ವಿದ್ಯಾಸಿರಿ)" ಸೌಲಭ್ಯಕ್ಕಾಗಿ Online ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, 31.12.2021ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿತ್ತು. ಆದರೆ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಪೋಷಕರು/ವಿದ್ಯಾರ್ಥಿಗಳು/ಶಿಕ್ಷಣ ಸಂಸ್ಥೆಗಳು ಮನವಿ ಸಲ್ಲಿಸಿದ್ದು, ಪ್ರಯುಕ್ತ ವಿದ್ಯಾರ್ಥಿಗಳ ಹಿತಾದೃಷ್ಟಿಯಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 31.01.2022ರವರೆಗೆ ವಿಸ್ತರಿಸಲಾಗಿದೆ. ಆಸಕ್ತ ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ www.backwardclasses.kar.nic.inನ್ನು ನೋಡುವುದು.

| | |
|---|---|
| • ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : | 31.01.2022 |
| • ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ | www.ssp.postmatric.karnataka.gov.in/2021-22 |
| • ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ | www.bcwd.karnataka.gov.in/ |
| • ಸಂಪರ್ಕಿಸಬೇಕಾದ ಸಹಾಯವಾಣಿ ಸಂಖ್ಯೆ:<br>• ಇ-ಮೇಲ್ | 8050770005 / 8050770004<br>Bcwd.scholarship@karnataka.gov.in |
| • ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ:<br>ಇ-ಮೇಲ್<br>ದೂರವಾಣಿ ಸಂಖ್ಯೆ | postmetrichelpdesk@karnataka.gov.in<br>080-35254757 |

Shilpa H.S.

ಜಿಲ್ಲಾ ಅಧಿಕಾರಿಗಳು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಮೈಸೂರು ಜಿಲ್ಲೆ, ಮೈಸೂರು.

# ಪ್ರಕಟಣೆ

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 31.12.2021
- ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ: www.ssp.karnataka.gov.in/8080/2122
- ಅರ್ಹತೆ: ಒಂದನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

### ವಿದ್ಯಾರ್ಥಿವೇತನ ಸೌಲಭ್ಯದ ವಿವರ

(ಎ) ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿವೇತನ : (ರೂ.ಗಳಲ್ಲಿ)

| ತರಗತಿ | ಬಾಲಕ/ಬಾಲಕಿ (10 ತಿಂಗಳಿಗೆ) | ಒಟ್ಟು |
|---|---|---|
| ತರಗತಿ 1 ರಿಂದ 10 | 2000/- | 2000/- |

(ಬಿ) ರಾಜ್ಯ ವಿದ್ಯಾರ್ಥಿವೇತನ ದರಗಳು : (ರೂ.ಗಳಲ್ಲಿ)

| ತರಗತಿ | ಬಾಲಕ/ಬಾಲಕಿ (10 ತಿಂಗಳಿಗೆ) | ಆಡ್‌ಹಾಕ್ ಗ್ರಾಂಟ್ | ಒಟ್ಟು |
|---|---|---|---|
| ತರಗತಿ 1 ರಿಂದ 5 | 250/- | 500/- | 750/- |
| ತರಗತಿ 6 ರಿಂದ 8 | 400/- | 500/- | 900/- |
| ತರಗತಿ 9 ರಿಂದ 10 | 500/- | 500/- | 1000/- |

### ಅರ್ಜಿ ಸಲ್ಲಿಸಲು ಅಗತ್ಯವಿರುವ ಮಾಹಿತಿ/ದಾಖಲೆ

- ✓ ಶಾಲೆಯಲ್ಲಿ ಪ್ರವೇಶ ಪಡೆದಿರುವ ಬಗ್ಗೆ (SATS-ID) (ಸ್ಯಾಟ್ಸ್-ಐಡಿ ತಿಳಿಯಲು ವೆಬ್ ವಿಳಾಸ:http://sts.karnataka.gov.in)
- ✓ ವಿದ್ಯಾರ್ಥಿಯ ಆಧಾರ ಸಂಖ್ಯೆ
- ✓ ಪೋಷಕರ ಆಧಾರ ಸಂಖ್ಯೆ
- ✓ ಜಾತಿ ಪ್ರಮಾಣ ಪತ್ರದ ಆರ್ ಡಿ ಸಂಖ್ಯೆ
- ✓ ಆದಾಯ ಪ್ರಮಾಣ ಪತ್ರದ ಆರ್ ಡಿ ಸಂಖ್ಯೆ
- ✓ ಸರ್ಕಾರಿ ವಿದ್ಯಾರ್ಥಿನಿಲಯದಲ್ಲಿ ಪ್ರವೇಶ ಪಡೆದಿದ್ದಲ್ಲಿ, ವಿದ್ಯಾರ್ಥಿನಿಲಯ ಪ್ರವೇಶ ಸಂಖ್ಯೆ (ಸಂಬಂಧಿಸಿದ ಇಲಾಖೆಯಿಂದ ಪಡೆದಿದ್ದು)
- ✓ ಹಿಂದಿನ ಸಾಲಿನಲ್ಲಿ ವಿದ್ಯಾರ್ಥಿವೇತನ ಪಡೆದಿದ್ದಲ್ಲಿ ಹಿಂದಿನ ಸಾಲಿನ ಅರ್ಜಿ ಸಂಖ್ಯೆ, (ಸಂಬಂಧಿಸಿದ ಇಲಾಖೆಯಿಂದ ಪಡೆದಿದ್ದು)
- ✓ ಆಧಾರ್ ಸಂಖ್ಯೆ ಇಲ್ಲದಿದ್ದಲ್ಲಿ, ಆಧಾರ್ ನೋಂದಣಿ ಮಾಡಿಸಿದ ಇ.ಐ.ಡಿ ಸಂಖ್ಯೆ, ಬ್ಯಾಂಕ್ ಖಾತೆ ಸಂಖ್ಯೆ, ಐ.ಎಫ್.ಎಸ್.ಸಿ ಸಂಖ್ಯೆ, ಬ್ಯಾಂಕಿನ ವಿಳಾಸ
- ✓ ಪೋಷಕರ ಆಧಾರ ನಂಬರ್‌ಗೆ ಲಿಂಕ್ ಮಾಡಿರುವ ಮೊಬೈಲ್ ನಂಬರ್ ಹಾಗೂ ಭೌತಿಕ ಅನುಮತಿ ಪತ್ರ.

### ಅರ್ಜಿ ಸಲ್ಲಿಸಲು ಬೇಕಾದ ಅರ್ಹತೆಗಳು:

1. ಕುಟುಂಬದ ವಾರ್ಷಿಕ ಆದಾಯ ಮಿತಿ:
   - ➢ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿವೇತನ: ರೂ.2.50 ಲಕ್ಷ/ವಾರ್ಷಿಕ
   - ➢ ರಾಜ್ಯ ಸರ್ಕಾರದ ವಿದ್ಯಾರ್ಥಿವೇತನ: ರೂ.1.00 ಲಕ್ಷ/ವಾರ್ಷಿಕ ಪ್ರವರ್ಗ-1 ವಿದ್ಯಾರ್ಥಿಗಳಿಗೆ ಮಾತ್ರ ರೂ.44,500/- ವಾರ್ಷಿಕ ಪ್ರವರ್ಗ-2ಎ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳಿಗೆ
2. ಫಲಾನುಭವಿಯ ಜಾತಿ:
   - ➢ ರಾಜ್ಯ ಸರ್ಕಾರವು ಅಧಿಸೂಚಿಸಿರುವ ಪ್ರವರ್ಗ-1, 2ಎ, 3ಎ ಮತ್ತು 3ಬಿ ಹಾಗೂ ಕೇಂದ್ರ ಸರ್ಕಾರವು ಅಧಿಸೂಚಿಸಿರುವ ಇತರೆ ಹಿಂದುಳಿದ ವರ್ಗಗಳಡಿ ಬರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯಕ್ಕೆ ಅರ್ಹರಾಗಿರುವುದಿಲ್ಲ.
3. ಆದಾಯ ಮತ್ತು ಮೆರಿಟ್ ಆಧಾರದಲ್ಲಿ ಮಂಜೂರಾತಿ:
   - ➢ ಪ್ರವರ್ಗ-1 ಮತ್ತು ಅಲೆಮಾರಿ/ಅರೆ ಅಲೆಮಾರಿ ಜನಾಂಗಗಳಿಗೆ ಸೇರಿದ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುವುದು
   - ➢ ತದ ನಂತರ ಉಳಿದ ವಿದ್ಯಾರ್ಥಿಗಳಿಗೆ ಆದಾಯ ಮತ್ತು ಮೆರಿಟ್ ಆಧಾರದ ಮೇಲೆ ರಾಜ್ಯ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುವುದು.

ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿ: ಸಂಬಂಧಪಟ್ಟ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ/ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ/www.backwardclasses.kar.nic.in

ಜಿಲ್ಲಾ ಅಧಿಕಾರಿಗಳು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಮೈಸೂರು ಜಿಲ್ಲೆ, ಮೈಸೂರು.